**ಓ.ಎಸ್. ನಂ. 127/2022 ಪಿ.ಡಬ್ಲೂ-1 ಹೆಸರು - ಮಹದೇವಪ್ಪ**

**ಸಾಕ್ಷಿಯನ್ನು ದಿನಾಂಕಃ 19/07/2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ನಾನು ಸಾಕ್ಷ್ಯಕ್ಕಾಗಿ ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ನನಗೆ ತಿಳಿದಿವೆ ಮತ್ತು ಅವು ಸತ್ಯವಾಗಿವೆ. ಪ್ರಮಾಣ ಪತ್ರದಲ್ಲಿ ಇರುವ ರುಜುಗಳು ನನ್ನದೇ ಆಗಿರುತ್ತವೆ.

**ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-**

ವಾದಿಯು ಈ ದಾವೆ ನಡೆಸಲು ನನಗೆ ಅಧಿಕಾರ ನೀಡಿ ಬರೆದುಕೊಟ್ಟಿರುವ ವಿಶೇಷ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದೇನೆ ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನ ಪಹಣಿ ಪತ್ರಿಕೆ ಮತ್ತು ಎಂ.ಆರ್ ನಕಲು ಹಾಜರುಪಡಿಸಿದ್ದೇನೆ ಅವುಗಳನ್ನು ಕ್ರಮವಾಗಿ ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು. ಪಾರ್ವತಮ್ಮನವರು ಈ ದಾವೆಯ ವಾದಿಗೆ ಬರೆದುಕೊಟ್ಟಿರುವ ಮರಣ ಶಾಸನ ಪತ್ರ ಹಾಜರುಪಡಿಸಿದ್ದೇನೆ ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಪಾರ್ವತಮ್ಮನವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂದಪಟ್ಟ 11 ಇ ನಕ್ಷೆ ಹಾಜರುಪಡಿಸಿದ್ದೇನೆ ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

(ಪ್ರತಿವಾದಿ ಪರ ವಕೀಲರನ್ನು ಕರೆಸಲಾಯಿತು ಅವರು ಗೈರು ಹಾಜರು ಇರುತ್ತಾರೆ. ಆದ್ದರಿಂದ ಪಾಟೀ ಸವಾಲಿಗೆ ಮುಂದೂಡಲಾಯಿತು)

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಓ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**